# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
## Karnataka Examinations Authority

KEA


ಸಂಖ್ಯೆ: ಇಡಿ/ಕೆಇಎ/ಪಿಜಿಸಿಇಟಿ-2023 (ಆರ್‌ಡಿ) ದಿನಾಂಕ: 23-11-2023

**ಎಂಬಿಎ / ಎಂಸಿಎ / ಎಂಇ / ಎಂ.ಟೆಕ್ / ಎಂ.ಆರ್ಕಿಟೆಕ್ಚರ್ ಕೋರ್ಸುಗಳ**

**ಮೊದಲನೆ ವರ್ಷದ / 1ನೇ ಸೆಮಿಸ್ಟರ್‌ಗಳ ಪ್ರವೇಶ**

**<u>ನಮೂದಿಸಿರುವ ದಾಖಲೆಗಳ ವಿವರಗಳನ್ನು ಆನ್‌ಲೈನ್ ಮೂಲಕ ಪರಿಶೀಲನೆ</u>**

**ಅ. ಮೀಸಲಾತಿ ಗಳ ಕ್ಲೇಮ್ ಗೆ ಸಂಬಂಧಿಸಿದಂತೆ ಆರ್.ಡಿ. ಸಂಖ್ಯೆ ತಿದ್ದುಪಡಿ ಮಾಡಿಕೊಳ್ಳಲು ಸೂಚನೆ**

ಪಿಜಿಸಿಇಟಿ-2023ಕ್ಕೆ ಆನ್‌ಲೈನ್ ಅರ್ಜಿಯಲ್ಲಿ ಅಭ್ಯರ್ಥಿಗಳು ನಮೂದಿಸಿರುವ ಜಾತಿ / ಆದಾಯ ಪ್ರಮಾಣ ಪತ್ರದ / ಕಲ್ಯಾಣ ಕರ್ನಾಟಕ ಪ್ರಮಾಣ ಪತ್ರದ ಆರ್‌ಡಿ ಸಂಖ್ಯೆಯನ್ನು ಕಂದಾಯ ಇಲಾಖೆಯಲ್ಲಿರುವ ಆರ್‌ಡಿ ಸಂಖ್ಯೆಗೆ ಆನ್‌ಲೈನ್ ಮೂಲಕ ಪರಿಶೀಲನೆ ಮಾಡಲಾಗಿದೆ.

ಪರಿಶೀಲನೆಯ ಪ್ರಕ್ರಿಯೆಯಲ್ಲಿ ಅಭ್ಯರ್ಥಿಗಳ ಹೆಸರು ಅಥವಾ ನಮೂದಿಸಿರುವ ಜಾತಿ ತಾಳೆಯಾಗದಿರುವುದು, ಪ್ರಮಾಣ ಪತ್ರವು ಚಾಲ್ತಿಯಲ್ಲಿ ಇಲ್ಲದೇ ಇರುವುದು, ಅಭ್ಯರ್ಥಿಗಳ ಹೆಸರಿನಲ್ಲಿ ಪ್ರಮಾಣ ಪತ್ರ ಇಲ್ಲದೇ ಇರುವುದು ಅಥವಾ ನಿಗದಿತ ನಮೂನೆಗಳಲ್ಲಿ ಪಡೆಯದೇ ಇರುವುದು, ಇನ್ನಿತರ ವಿವಿಧ ಕಾರಣಗಳಿಂದ ಅರ್‌ಡಿ ಸಂಖ್ಯೆಗಳು ತಾಳೆ ಹೊಂದದೇ ತಿರಸ್ಕೃತಗೊಂಡಿರುವ ಅಭ್ಯರ್ಥಿಗಳ ಪಟ್ಟಿಮಾಡಿ ಪ್ರಾಧಿಕಾರದ ವೆಬ್‌ಸೈಟನಲ್ಲಿ ಪ್ರಕಟಿಸಲಾಗಿದೆ.

ತಾಳೆ ಹೊಂದದೇ ಇರುವ ಪಟ್ಟಿಯಲ್ಲಿ ಹೆಸರು ಇರುವಂತಹ ಅಭ್ಯರ್ಥಿಗಳು ಮಾತ್ರ ದಿನಾಂಕ 24-11-2023ರ ಸಂಜೆ 4.00 ರಿಂದ 27-11-2023 ರ ಬೆಳಿಗ್ಗೆ 11.00 ರವರೆಗೆ ಪ್ರಾಧಿಕಾರದ ಪೋರ್ಟಲ್‌ನಲ್ಲಿ ಅಭ್ಯರ್ಥಿಗಳ ಲಾಗಿನ್ ಮತ್ತು ಪಾಸ್‌ವರ್ಡ್ ನಮೂದಿಸಿ ಸರಿಯಾದ ಆರ್‌ಡಿ ಸಂಖ್ಯೆಯನ್ನು ದಾಖಲಿಸಬಹುದಾಗಿದೆ.

ಆ. ಎಂ.ಇ., ಎಂ.ಟೆಕ್, ಎಂ.ಆರ್ಕಿಟೆಕ್ಚರ್, ಎಂಬಿಎ ಮತ್ತು ಎಂಸಿಎ ಪ್ರವೇಶಕ್ಕೆ "ಎ" ಮತ್ತು 'ಎನ್' *ಅರ್ಹತಾ ಕಂಡಿಕೆಯವರು ದಾಖಲೆಗಳ ಪರಿಶೀಲನೆಗೆ ಹಾಜರಾಗುವಂತಿಲ್ಲ.* ಅರ್ಹತಾ ಕಂಡಿಕೆ 'ಎ' ಮತ್ತು "ಎನ್" ಅನ್ನು ಕ್ಲೇಮ್ ಮಾಡಿರುವ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿನಿಂದ ವೆರಿಫಿಕೇಶನ್ ಸ್ಲಿಪ್ ಅನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. (ದಿನಾಂಕವನ್ನು ನಂತರ ತಿಳಿಸಲಾಗುವುದು.) ಆದರೆ 'ಎ' ಮತ್ತು "ಎನ್" ಅನ್ನು ಕ್ಲೇಮ್ ಮಾಡಿರುವ ಅಭ್ಯರ್ಥಿಗಳು GATE ಅಭ್ಯರ್ಥಿಗಳಾಗಿದ್ದಲ್ಲಿ ಅಥವಾ Part-Time ಕೋರ್ಸುಗಳ ಪ್ರವೇಶ ಕೋರಿರುವ ಅಭ್ಯರ್ಥಿಗಳಾಗಿದ್ದಲ್ಲಿ ಅಥವಾ Sponsor quota ಅಭ್ಯರ್ಥಿಗಳಾಗಿದ್ದಲ್ಲಿ, ಪಿಜಿಸಿಇಟಿ 2023ರ ಅರ್ಜಿ ನಮೂನೆಯಲ್ಲಿ ಅರ್ಹತಾ ಕಂಡಿಕೆ ಬಿ, ಸಿ, ಡಿ, ಗಳನ್ನು ಕ್ಲೇಮ್ ಮಾಡಿರುವ ಅಭ್ಯರ್ಥಿಗಳಿಗೆ ದಾಖಲೆಗಳ ಪರಿಶೀಲನೆಯನ್ನು ಕೆಇಎ, ಬೆಂಗಳೂರು ಇಲ್ಲಿ ನಡೆಸಲಾಗುವುದು. ಅಂತಹ ಅಭ್ಯರ್ಥಿಗಳು ದಾಖಲೆಗಳ ಪರಿಶೀಲನೆಗೆ ಹಾಜರಾಗಬೇಕು. ವೇಳಾಪಟ್ಟಿಯನ್ನು ನಂತರ ಪ್ರಕಟಿಸಲಾಗುವುದು.

*ಕಾರ್ಯನಿರ್ವಾಹಕ ನಿರ್ದೇಶಕರು*


**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**

18th Cross, Sampige Road, Malleshwaram, Bengaluru - 560 012.

Phone: 080 - 23 564 583, 23 460 460, 23 361 786, Fax: 080 - 23 461 576

e-mail : keauthority-ka@nic.in Website : http://kea.kar.nic.in